ಉದ್ಯೋಗವಕಾಶ.

99 (208)

ಶ್ರೀ ಕುಂಬ್ಳೆ ಸುಂದರರಾವ್ (ಸುರತ್ಕಲ್): ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?ೀ

ಅ) ಸುರತ್ಕಲ್ ಕ್ಷೇತ್ರದಲ್ಲಿ 1995ರಿಂದ ಇಲ್ಲಿಯವರೆಗೆ ಸ್ಥಾಪನೆಗೊಂಡ ಬೃಹತ್ ಮತ್ತು ಸಣ್ಣ ಕೈಗಾರಿಕೆಗಳೆಷ್ಟು?

ಆ) ಈ ಬೃಹತ್ ಮತ್ತು ಸಣ್ಣ ಕೈಗಾರಿಕೆಗಳಿಗೆ ಉದ್ಯೋಗಿಗಳನ್ನು ಯಾವ ಕ್ರಮದಲ್ಲಿ ನೇಮಕಗೊಳಿಸಲಾಗುವುದು?

ಇ) ಸ್ಥಳೀಯರಲ್ಲದವರಿಗೆ ಹೆಚ್ಚಿನ ಉದ್ಯೋಗ ನೀಡಿರುವ ಬಗ್ಗೆ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಈ) ಹಾಗಿದ್ದಲ್ಲಿ, ಸ್ಥಳೀಯರಿಗೆ ಅವಕಾಶ ಒದಗಿಸಲು ಅನುಕೂಲವಾಗುವಂತೆ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಬಿ.ಎ.ಮೊಯಿದ್ದೀನ್ (ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕೆ ಸಚಿವರು):

ಅ) ಬೃಹತ್ ಪ್ರಮಾಣದ ಕೈಗಾರಿಕೆಗಳು- 2, ಮತ್ತು

ಸಣ್ಣ ಪ್ರಮಾಣದ ಕೈಗಾರಿಕೆಗಳು- 175

ಆ) ಪ್ರತಿಯೊಂದು ಕೈಗಾರಿಕಾ ಘಟಕಗಳಲ್ಲಿ ತನ್ನದೇ ಆದ ನೇಮಕಾತಿ ವಿಧಾನಗಳಿರುತ್ತವೆ.

ಇ) ಇಲ್ಲ.

ಈ) ಸರ್ಕಾರವು ನೂತನ ಕೈಗಾರಿಕಾ ಘಟಕಗಳಿಗೆ ರಿಯಾಯಿತಿ ಮತ್ತು ಸವಲತ್ತುಗಳನ್ನು ನೀಡುವಾಗ ಸ್ಥಳೀಯರಿಗೆ ಉದ್ಯೋಗ ನೀಡಬೇಕೆಂಬ ಷರತ್ತನ್ನು ವಿಧಿಸುತ್ತದೆ. ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು ಸ್ಥಳೀಯರಿಗೆ ಉದ್ಯೋಗಾವಕಾಶಗಳನ್ನು ನೀಡುವ ಬಗ್ಗೆ ಮೇಲ್ವಿಚಾರಣೆಯನ್ನು ನಡೆಸುತ್ತಿರುತ್ತದೆ.

ನರಸಿಂಹರಾಜ ವಿಧಾನ ಸಭಾಕ್ಷೇತ್ರದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣ

100 (172)

ಶ್ರೀ ಇ.ಮಾರುತಿರಾವ್ ಪವಾರ್ (ನರಸಿಂಹರಾಜ): ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನರಸಿಂಹರಾಜ ಕ್ಷೇತ್ರದ ರಾಘವೇಂದ್ರ ಬಡಾವಣೆ (ಹಿರಿಯ ಬೋವಿಪಾಳ್ಯ)ಯಲ್ಲಿ ಜಿಲ್ಲಾ ಅಲ್ಪಸಂಖ್ಯಾತರ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದು ಇದುವರೆವಿಗೂ ಕಟ್ಟಡದ ಕಾಮಗಾರಿ ಪ್ರಾರಂಭವಾಗಿಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಕಟ್ಟಡದ ನಿರ್ಮಾಣದ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಮಾಲೀಕಯ್ಯ ವಿ.ಗುತ್ತೇದಾರ್ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು):

ಅ) ಹೌದು.

ಆ) ಸದರಿ ನಿವೇಶನದ ತಕರಾರು ನಿಮಿತ್ತ ಕಟ್ಟಡ ನಿರ್ಮಾಣವನ್ನು ಪ್ರಾರಂಭಿಸಿಲ್ಲ. ಪ್ರತಿಯಾಗಿ ಕಟ್ಟಡ ನಿರ್ಮಾಣವನ್ನು ಮೆಟ್ರಿಕ್‌ನಂತರದ ಬಾಲಕರ ವಿದ್ಯಾರ್ಥಿನಿಲಯದ ಸ್ವಂತ ಕಟ್ಟಡದ ಆವರಣದಲ್ಲಿ ನಿರ್ಮಿಸಲಾಗುತ್ತಿದೆ

ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿದ್ಯಾರ್ಥಿನಿಲಯಗಳಲ್ಲಿ ಕೆಲಸ ಮಾಡುವ ನೌಕರರುಗಳಿಗೆ ವಿಶೇಷ ಭತ್ಯೆ ಮಂಜೂರಾತಿ

101 (89)

ಶ್ರೀ ಇ.ಮಾರುತಿರಾವ್ ಪವಾರ್ (ನರಸಿಂಹರಾಜ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಪರಿಶಿಷ್ಟ ಜಾತಿ/ವರ್ಗದ ವಿದ್ಯಾರ್ಥಿ ನಿಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಡಿಗೆಯವರು, ಅಡಿಗೆ ಸಹಾಯಕರು ರಜಾ ದಿನಗಳಲ್ಲೂ ಕರ್ತವ್ಯ ನಿರ್ವಹಿಸುತ್ತಿದ್ದು ಇವರಿಗೆ ಯಾವುದೇ ವಿಶೇಷ ಭತ್ಯೆ ಅಥವಾ ರಜಾವನ್ನು ಮಂಜೂರು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಸದರಿ ಸಿಬ್ಬಂದಿಯವರಿಗೆ ರಜಾ ಅಥವಾ ವಿಶೇಷ ಭತ್ಯೆ ನೀಡುವ ಬಗ್ಗೆ ಸರ್ಕಾರದವರು ಪರಿಶೀಲಿಸುವರೆ?